## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಕೆ. ಅಬ್ದುಲ್ ಜಬ್ಬಾರ್**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 183**

**ಉತ್ತರಿಸಬೇಕಾದ ದಿನಾಂಕ : 05.12.2023**

**ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು**

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ 21 ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳಲ್ಲಿ 1965 ವಿವಿಧ ದರ್ಜೆಯ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ ಸದರಿ ಬ್ಯಾಂಕ್‌ಗಳಲ್ಲಿ ಸಿಬ್ಬಂದಿಯ ಕೊರತೆಯಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರ ಗಮನಿಸಿದೆಯೇ: | ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದ ರೈತರಿಗೆ/ಸಾರ್ವಜನಿಕ ಬ್ಯಾಂಕ್ ಸೇವೆ/ಸಾಲ ಸೌಲಭ್ಯ ಕಲ್ಪಿಸಲು ತೊಂದರೆಯಾಗುತ್ತಿರುವ ಪ್ರಕರಣಗಳು ಕಂಡುಬಂದಿರುವುದಿಲ್ಲ. |
| ಇ) | ಹಾಗಿದ್ದಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳನ್ನು ಭರ್ತಿಮಾಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ: | ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ಗಳು ಮಂಜೂರಾದ ವೃಂದ ಬಲದ ಮಿತಿಯೊಳಗೆ ನಬಾರ್ಡ್‌ನ ಮಾನವ ಸಂಪನ್ಮೂಲ ಮಾರ್ಗಸೂಚಿಗಳು ಹಾಗೂ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 17, 17ಎ ಹಾಗೂ 18ರ ಅವಕಾಶಗಳ ರೀತ್ಯಾ ತನ್ನ ಅಗತ್ಯತೆಗೆ ಅನುಗುಣವಾಗಿ ಅವಶ್ಯವಿರುವ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವ ಅಧಿಕಾರವು ಬ್ಯಾಂಕ್‌ಗಳ ಆಡಳಿತ ಮಂಡಳಿಗೆ ಇದ್ದು, ಅವಶ್ಯಕತೆಗೆ ಅನುಸಾರವಾಗಿ ಬ್ಯಾಂಕಿನ ಆಡಳಿತ ಮಂಡಳಿ ನೇಮಕಾತಿ ಮಾಡಿಕೊಳ್ಳುತ್ತದೆ. |
| ಈ) | ರಾಜ್ಯದ 21 ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳಲ್ಲಿ ಖಾಲಿಯಿರುವ 1965 ವಿವಿಧ ದರ್ಜೆಯ ಹುದ್ದೆಗಳನ್ನು ಭರ್ತಿ ಮಾಡಲು ಇರುವ ತೊಂದರೆಗಳೇನು? (ಈ ಬಗ್ಗೆ ಕೈಗೊಂಡ ಕ್ರಮದ ಪೂರ್ಣ ವಿವರ ನೀಡುವುದು) | ಸಹಕಾರ ಸಂಸ್ಥೆಗಳು ಸ್ವಾಯತ್ತ ಸಂಸ್ಥೆಗಳಾಗಿದ್ದು, ಬ್ಯಾಂಕಿನ ಸಿಬ್ಬಂದಿ ವೃಂದಬಲ ನೇಮಕಾತಿ ಪ್ರಾಧಿಕಾರವು ಅಯಾಯ ಬ್ಯಾಂಕಿನ ಆಡಳಿತ ಮಂಡಳಿಗಳೇ ಆಗಿರುತ್ತವೆ.<br>ಮಂಜೂರಾದ ವೃಂದಬಲದ ಅನುಸಾರ ಕಾಲಕಾಲಕ್ಕೆ ನಿವೃತ್ತಿಯಿಂದ ತೆರವಾಗುವ ಹುದ್ದೆಗಳನ್ನು ಗಣನೆಗೆ ತೆಗೆದುಕೊಂಡು, ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಮತ್ತು ಸಿಬ್ಬಂದಿ ಅವಶ್ಯಕತೆಯ ಅನುಸಾರ ನೇಮಕಾತಿಗೆ ಕ್ರಮವಿಡಲಾಗುತ್ತದೆ. |

**ಸಂಖ್ಯೆ: ಸಿಒ 238 ಸಿಸಿಬಿ 2023**

K. N. Rajanna

**(ಕೆ.ಎನ್.ರಾಜಣ್ಣ)**

ಸಹಕಾರ ಸಚಿವರು